# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1049 (1150) |
| ಸದಸ್ಯರ ಹೆಸರು | ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 07.03.2022 |
| ಉತ್ತರಿಸಬೇಕಾದವರು | ಉನ್ನತ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| (ಅ) | 2019 ರಲ್ಲಿ ಆರಂಭವಾದ ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆ ಕೋವಿಡ್ ಕಾರಣದಿಂದ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ನಿಯಮಗಳನ್ವಯ ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ ನಡೆಸಿ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ. ಅದರಂತೆ ಸಹಾಯಕ ಪ್ರಾಧ್ಯಾಪಕರ ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿದ್ದು, ಯಾವುದೇ ವಿಳಂಬವಾಗಿರುವುದಿಲ್ಲ. |
| (ಆ) | ಈ ಪ್ರಕ್ರಿಯೆ ವಿಳಂಬ-ವಾಗುತ್ತಿರುವುದರಿಂದ 2 ವರ್ಷಗಳ ಕಾಲ ವಯೋಮಿತಿ ಸಡಿಲಿಕೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು; | ಕಾಲೇಜು ಶಿಕ್ಷಣ ಇಲಾಖಾ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ 1242 ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದ ಪತ್ರ ಸಂಖ್ಯೆ: ಇಡಿ 185 ಡಿಸಿಇ 2018, ದಿನಾಂಕ:03.08.2019ರಲ್ಲಿ ಅನುಮತಿ ನೀಡಲಾಗಿರುತ್ತದೆ.<br>ಅದಂತೆ, ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಯು.ಜಿ.ಸಿ. ನಿಯಮಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ವಿಶೇಷ ನೇಮಕಾತಿ ನಿಯಮಾವಳಿಗಳನ್ನು ರೂಪಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/257/ಡಿಸಿಇ/2019(ಭಾಗ-3), ದಿನಾಂಕ: 08.07.2020 ಮತ್ತು ತಿದ್ದುಪಡಿ ಅಧಿಸೂಚನ ದಿನಾಂಕ:19.10.2020 ರಲ್ಲಿ ನಿಯಮಗಳನ್ನು ರೂಪಿಸಲಾಗಿದೆ.<br>ಸದರಿ ವಿಶೇಷ ನೇಮಕಾತಿ ನಿಯಮಗಳನ್ವಯ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಭರ್ತಿ ಮಾಡಲು ಸರ್ಕಾರವು ದಿನಾಂಕ:26.08.2021 ರ ಸಂಖ್ಯೆ:ಇಡಿ/257/ಡಿಸಿಇ/2019ರಲ್ಲಿ ಅಧಿಸೂಚನೆ ಹೊರಡಿಸಿದೆ. ಆಯ್ಕೆ ಪ್ರಾಧಿಕಾರವಾದ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಈಗಾಗಲೇ ದಿನಾಂಕ:30.09.2021 ರಂದು ಅರ್ಹ ಅಭ್ಯರ್ಥಿಗಳಿಂದಅರ್ಜಿ ಆಹ್ವಾನಿಸಿ ಅಧಿಸೂಚನೆ ಹೊರಡಿಸಿದ್ದು, ದಿನಾಂಕ:30.11.2021 ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಿರುತ್ತದೆ. ಪ್ರಸ್ತುತ ದಿನಾಂಕ:12.03.2022 ರಿಂದ 16.03.2022 ರವರೆಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ನಡೆಸಲು ಸಿದ್ಧತೆಯನ್ನು ನಡೆಸಿರುತ್ತದೆ.<br>ಸಾಮಾನ್ಯ ನೇಮಕಾತಿ ನಿಯಮಗಳಲ್ಲಿ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 35 ವರ್ಷಗಳು, ಇತರ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 38 ವರ್ಷಗಳು ಹಾಗೂ ಪರಿಶಿಷ್ಟ ಜಾತಿ/ಪಂಗಡ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷಗಳ ವಯೋಮಿತಿಯನ್ನು ನಿಗಧಿಪಡಿಸಿದೆ.<br>ಆದರೆ, ಸಹಾಯಕ ಪ್ರಾಧ್ಯಾಪಕರ ವಿಶೇಷ ನೇಮಕಾತಿ ನಿಯಮಗಳಲ್ಲಿ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ಅರ್ಜಿ ಸಲ್ಲಿಸುವ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 40 ವರ್ಷಗಳು, ಇತರ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ ಗರಿಷ್ಠ 43 ವರ್ಷಗಳು ಹಾಗೂ ಪರಿಶಿಷ್ಟ ಜಾತಿ/ಪಂಗಡ ಮತ್ತು ಪ್ರವರ್ಗ-1 ರ ಅಭ್ಯರ್ಥಿಗಳಿಗೆ ಗರಿಷ್ಠ 45 ವರ್ಷಗಳ ವಯೋಮಿತಿಯನ್ನು ನಿಗಧಿಪಡಿಸಲಾಗಿರುತ್ತದೆ. |
| (ಇ) | ನೋಟಿಫಿಕೇಷನ್ ನಂಬರ್ ಇಡಿ 89ಪಿಬಿಎಸ್ 2021ರಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಗೆ 2 ವರ್ಷ ವಯೋಮಿತಿ ಸಡಿಲಿಕೆ ಮಾಡಿರುವಂತೆ ಸಹಾಯಕ ಪ್ರಾಧ್ಯಾಪಕರ ನೇಮಕಾತಿಗೆ ಸಹ ವಯೋಮಿತಿ ಸಡಿಲಿಕೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು? | |

| | | |
|---|---|---|
| | | ಅದರಂತೆ, ಸಹಾಯಕ ಪ್ರಾಧ್ಯಾಪಕರ ವಿಶೇಷ ನೇಮಕಾತಿ ನಿಯಮಗಳಲ್ಲಿ ಅಭ್ಯರ್ಥಿಗಳ ಗರಿಷ್ಠ ವಯೋಮಿತಿಯನ್ನು ಈಗಾಗಲೇ ಹೆಚ್ಚಿಸಿ/ಸಡಿಲಿಕೆ ನೀಡಿ, ಅರ್ಹ ಅಭ್ಯರ್ಥಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ |

**ಇಡಿ 74 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**